# ಉದಯವಾಣಿ

**Sunday 22nd January 2023, Page No.02**

**SAD DEMISE**

## ಡಾ.ಪಾಂಡುರಂಗಶೆಟ್ಟಿ ನಿಧನ

**ಬೆಂಗಳೂರು:** ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷರೂ ಆಗಿದ್ದ ಆರ್.ವಿ. ವಿಶ್ವವಿದ್ಯಾಲಯದ ಕುಲಾಧಿಪತಿ ಡಾ.ಎಂ.ಕೆ.ಪಾಂಡುರಂಗ ಶೆಟ್ಟಿ(92) ವಯೋಸಹಜ ಕಾಯಿಲೆಯಿಂದ ಶನಿವಾರ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಭಾನುವಾರ ಬೆಳಗ್ಗೆ 10 ಗಂಟೆಗೆ ಜಯನಗರದ ಅಶೋಕ ಪಿಲ್ಲರ್ ರಸ್ತೆಯಲ್ಲಿರುವ ಆರ್.ವಿ.ಟೀಚರ್



ಕಾಲೇಜಿನಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಮಧ್ಯಾಹ್ನದ ನಂತರ ಬನಶಂಕರಿಯ ಹಿಂದು ರುದ್ರಭೂಮಿಯಲ್ಲಿ ಅಂತ್ಯ ಸಂಸ್ಕಾರ ನೆರವೇರಲಿದೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಮೃತರು ಪತ್ನಿ, ಇಬ್ಬರು ಪುತ್ರರು ಮತ್ತು ಅಪಾರ ಸಂಖ್ಯೆಯ ಅಭಿಮಾನಿಗಳನ್ನು ಅಗಲಿದ್ದಾರೆ. 1972ರಿಂದ ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಅಧ್ಯಕ್ಷರಾಗಿದ್ದ ಪಾಂಡುರಂಗ ಶೆಟ್ಟಿ ಅವರು, ಟ್ರಸ್ಟ್ ಮೂಲಕ ಆರ್ .ವಿ.ಕಾಲೇಜ್ ಆಫ್ ಎಂಜನಿಯರಿಂಗ್, ಡೆಂಟಲ್, ಆರ್ಕಿಟೆಕ್ಚರ್ ಸೇರಿದಂತೆ 24 ಶಿಕ್ಷಣ ಸಂಸ್ಥೆಗಳ ಸ್ಥಾಪನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಶಿಕ್ಷಣ ರಂಗದ ಸೇವೆಯನ್ನು ಪರಿಗಣಿಸಿ ರಾಜ್ಯ ಸರ್ಕಾರ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ನೀಡಿ ಪಾಂಡುರಂಗ ಶೆಟ್ಟಿ ಅವರನ್ನು ಗೌರವಿಸಿತ್ತು.